# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 48

ಸದಸ್ಯರ ಹೆಸರು : ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 29.01.2021

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ನಂಜನಗೂಡು ಪಟ್ಟಣದ ನೂತನ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದಲ್ಲಿ ನಿರ್ಮಿಸಿರುವ ಶೌಚಾಲಯವನ್ನು ಬಂದ್ ಮಾಡಿರುವುದರಿಂದ(ಮುಚ್ಚಿರುವುದರಿಂದ) ದಿನನಿತ್ಯ ಪ್ರಯಾಣಿಸುವ ನೂರಾರು ಸಾರ್ವಜನಿಕ ಪ್ರಯಾಣಿಕರಿಗೆ ಅನಾನುಕೂಲ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ನಂಜನಗೂಡು ಪಟ್ಟಣದಲ್ಲಿ ಎರಡು ಬಸ್ ನಿಲ್ದಾಣಗಳು ಇರುತ್ತವೆ. ಈ ಹಿಂದೆ ನಂಜನಗೂಡು ಹಳೆಯ ಬಸ್ ನಿಲ್ದಾಣದಿಂದ ಎಲ್ಲಾ ಸಾರಿಗೆಗಳು ಕಾರ್ಯಾಚರಣೆಯಾಗುತ್ತಿದ್ದ ಹಿನ್ನೆಲೆಯಲ್ಲಿ, ಹೊಸ ಬಸ್ ನಿಲ್ದಾಣದಲ್ಲಿನ ಶೌಚಾಲಯವನ್ನು ತಾತ್ಕಾಲಿಕವಾಗಿ ಮುಚ್ಚಲಾಗಿತ್ತು. ಪ್ರಸ್ತುತ ಎಲ್ಲಾ ಸಾರಿಗೆಗಳನ್ನು ನೂತನ ಬಸ್ ನಿಲ್ದಾಣದಿಂದ ಕಾರ್ಯಾಚರಣೆ ಮಾಡಲಾಗುತ್ತಿದ್ದು, ನೂತನ ಬಸ್ ನಿಲ್ದಾಣದಲ್ಲಿ ಶೌಚಾಲಯ ಕಾರ್ಯನಿರ್ವಹಣೆಯಲ್ಲಿರುತ್ತದೆ. |
| ಆ | ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಮತ್ತು ನಂಜನಗೂಡು ಪುರಸಭೆ ಮಧ್ಯೆ ಶೌಚಾಲಯ ನಿರ್ವಹಣೆ ವಿಷಯದಲ್ಲಿ ಗೊಂದಲ ಉಂಟಾಗಿರುವುದು ನಿಜವೇ; ಹಾಗಿದ್ದಲ್ಲಿ ಇದನ್ನು ಬಗೆಹರಿಸಿ ಸಾರ್ವಜನಿಕರಿಗೆ ಶೌಚಾಲಯ ಸೌಲಭ್ಯ ಒದಗಿಸಲು ಕ್ರಮ ಜರುಗಿಸಲಾಗುವುದೆ? | ಪ್ರಸ್ತುತ ನಂಜನಗೂಡು ಹಳೆಯ ಬಸ್ ನಿಲ್ದಾಣದಲ್ಲಿರುವ ಶೌಚಾಲಯವನ್ನು ಕ.ರಾ.ರ.ಸಾ.ನಿಗಮದ ವತಿಯಿಂದ ನಿರ್ವಹಣೆ ಮಾಡಲಾಗುತ್ತಿದ್ದು, ಶೌಚಾಲಯ ನಿರ್ವಹಣೆ ವಿಷಯದಲ್ಲಿ ಯಾವುದೇ ಗೊಂದಲಗಳಿರುವುದಿಲ್ಲ.<br><br>ಬಸ್ ನಿಲ್ದಾಣದಲ್ಲಿರುವ ಶೌಚಾಲಯದ ಮಲಿನ ನೀರನ್ನು ಸಾಗಿಸಲು ಸೆಪ್ಟಿಕ್ ಟ್ಯಾಂಕ್ ಮತ್ತು ಇಂಗುಗುಂಡಿ ನಿರ್ಮಿಸಲಾಗಿರುತ್ತದೆ. ಆದರೆ ಸದರಿ ಬಸ್ ನಿಲ್ದಾಣದಲ್ಲಿ ಮಲಿನ ನೀರನ್ನು ಸಾಗಿಸಲು ಒಳಚರಂಡಿ ವ್ಯವಸ್ಥೆ ಇರುವುದಿಲ್ಲ. ಒಳಚರಂಡಿ ವ್ಯವಸ್ಥೆ ಕಲ್ಪಿಸಿಕೊಡುವಂತೆ ಪೌರಾಯುಕ್ತರು, ಪುರಸಭೆ, ನಂಜನಗೂಡು, ಇವರನ್ನು ಕೋರಲಾಗಿದೆ.<br><br>ಮುಂದುವರೆದು ನಂಜನಗೂಡು ಹಳೆ ಬಸ್ ನಿಲ್ದಾಣದಿಂದ ಬಸ್ಸುಗಳ ಕಾರ್ಯಾಚರಣೆಯನ್ನು ನೂತನ ಬಸ್ ನಿಲ್ದಾಣಕ್ಕೆ ಸ್ಥಳಾಂತರಿಸಲಾಗಿದ್ದು, ನೂತನ ಬಸ್ ನಿಲ್ದಾಣದಲ್ಲಿ ಸಾರ್ವಜನಿಕರಿಗೆ ಸುಸಜ್ಜಿತ ಶೌಚಾಲಯ ವ್ಯವಸ್ಥೆ ಒದಗಿಸಲಾಗಿದೆ. |

ಸಂಖ್ಯೆ: ಟಿಡಿ 03 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯ ಮಂತ್ರಿಗಳು ಹಾಗೂ
ಸಾರಿಗೆ ಸಚಿವರು